



ಅರುಣ ಪಿ. ಭಟ್ಟ

## ವಾರಭವಿಷ್ಯ: 14.08.2025ರಿಂದ 20.08.2025ರವರೆಗೆ





ಹಣಕಾಸಿನ ಹರಿವು ಹೆಚ್ಚಿಸಿಕೊಳ್ಳಲು ಹೊಸ ಆಯ್ಕೆಗಳು ಸಿಗಲಿವೆ. ವೈಯಕ್ತಿಕ ಬದುಕಿನಲ್ಲಿ ಸಕಾರಾತ್ಮಕ ಬದಲಾವಣೆಗಳು ಕಾಣಿಸಿಕೊಳ್ಳುತ್ತವೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಮದುವೆ ಸಂಬಂಧ ಹುಡುಕುತ್ತಿದ್ದಲ್ಲಿ ಸೂಕ್ತ ವಧು ವರ ಒದಗಿಬರುವ ಅವಕಾಶ ಹೆಚ್ಚಿದೆ. ವಾರದ ಮಧ್ಯ ಭಾಗದಲ್ಲಿ ಬಹು ಮುಖ್ಯವಾದ ಸಂಗತಿಯೊಂದು ತಿಳಿದುಬರಲಿದೆ. ಶುಭದಿನ: 15. ಗಣಪತಿಗೆ ದೂರ್ವಾರ್ಚನೆ ಮಾಡಿರಿ.

---

ವೃತ್ತಿಪರರಿಗೆ ಅಥವಾ ವ್ಯಾಪಾರಸ್ಥರಿಗೆ ಉತ್ತಮವಾದ ಸಮಯ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವವರಿಗೆ ಯಶಸ್ಸು. ಕ್ರಿಯಾತ್ಮಕ ಕ್ಷೇತ್ರಗಳಲ್ಲಿ ತೊಡಗಿರುವವರಿಗೆ ಪ್ರಗತಿ. ನಿಮ್ಮ ಶ್ರಮಕ್ಕೆ ಮೆಚ್ಚುಗೆ ಸಿಗಲಿದ್ದಾರೆ. ಪೋಷಕರು ನಿಮ್ಮ ಪ್ರಗತಿಯಿಂದಾಗಿ ಸಂತೋಷ ಪಡಲಿದ್ದಾರೆ. ಹಣಕಾಸು ವಿಚಾರಕ್ಕೆ ಸಂಬಂಧಿಸಿದಂತೆ ಶುಭ ಸುದ್ದಿ ಕೇಳಲಿದ್ದೀರಿ. ಶುಭದಿನ: 19. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




---




ಉದ್ಯೋಗ ಹುಡುಕುತ್ತಿರುವವರಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಸಾಮಾಜಿಕ ಜೀವನದಲ್ಲಿ ಸಕ್ರಿಯರಾಗಿ ತೊಡಗಿಕೊಳ್ಳಲಿದ್ದೀರಿ. ಗೊಂದಲ ಹುಟ್ಟುಹಾಕಿದ್ದ ವಿಚಾರಗಳಿಗೆ ಪರಿಹಾರ ದೊರೆಯಲಿದೆ. ಮನೆಯಲ್ಲಿ ಶುಭ ಕಾರ್ಯ ಆಯೋಜನೆ ಮಾಡಲಿದ್ದೀರಿ. ವೃತ್ತಿಪರರಿಗೆ ಮೇಲಧಿಕಾರಿಗಳಿಂದ ಮೆಚ್ಚುಗೆಯ ಮಾತು ಕೇಳುವ ಯೋಗ ಇದೆ. ಶುಭದಿನ: 17. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.

---

ಕಾನೂನು ವ್ಯಾಜ್ಯಗಳಿದ್ದಲ್ಲಿ ಜಯ ಪಡೆಯುವ ಅವಕಾಶ ಇದೆ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಉದ್ಯೋಗ ಸ್ಥಳದಲ್ಲಿ ಬಹಳ ಮುಖ್ಯವಾದ ಜವಾಬ್ದಾರಿಯನ್ನು ನಿಮಗೆ ವಹಿಸಲಾಗುವುದು. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಸಾಮಾಜಿಕವಾಗಿ ನಿಮ್ಮ ಶ್ರಮ ಹಾಗೂ ದುಡಿಮೆಗೆ ಮನ್ನಣೆ ದೊರೆಯಲಿದೆ. ತಜ್ಞರ ಒಡನಾಟ ದೊರೆಯಲಿದೆ. ಶುಭದಿನ: 18. ಕಾಲ ಭೈರವನ ಸೇವೆ ಮಾಡಿರಿ.





---





ವೈವಾಹಿಕ ಜೀವನವು ಸಂತೋಷದಾಯಕವಾಗಿ ಇರುತ್ತದೆ. ಆರೋಗ್ಯವು ಉತ್ತಮವಾಗಿರುತ್ತದೆ. ಇದರಿಂದ ಉತ್ಸಾಹ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಮುಖ್ಯವಾದ ಯೋಜನೆಯ ಮೇಲುಸ್ತುವಾರಿ ಸಲುವಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಶುಭದಿನ: 15. ಈಶ್ವರನಿಗೆ ತಿಲಾರ್ಚನೆ ಮಾಡಿರಿ.

---

ಗೌರವ ಸನ್ಮಾನ ಪಡೆಯುವ ಅವಕಾಶ ಇದೆ. ಮಾರ್ಕೆಟಿಂಗ್ ವಿಭಾಗದಲ್ಲಿ ಇರುವವರಿಗೆ ಕೆಲಸಗಳು ಅಂದುಕೊಂಡ ವೇಗದಲ್ಲಿ ಸಾಗುವುದಿಲ್ಲ. ಹಣಕಾಸು ಹೂಡಿಕೆಯಲ್ಲಿ ನಿರೀಕ್ಷಿತ ಯಶಸ್ಸು ಪಡೆಯಲಿದ್ದೀರಿ. ಪ್ರತಿಸ್ಪರ್ಧಿಗಳ ವಿರುದ್ಧ ಮೇಲುಗೈ ಸಾಧಿಸಲಿದ್ದೀರಿ. ಸಂಗಾತಿ ಜತೆಗಿನ ಭಿನ್ನಾಭಿಪ್ರಾಯಗಳನ್ನು ಬಗೆಹರಿಸಿಕೊಳ್ಳಲು ಸೂಕ್ತ ಸಮಯ ಇದು. ಶುಭದಿನ: 19. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




---





ವಿವಿಧ ಕ್ಷೇತ್ರಗಳಲ್ಲಿ ಪ್ರಗತಿ ಪಡೆಯಲಿದ್ದೀರಿ. ಯಶಸ್ಸು ಪಡೆಯುವ ಯೋಗ ಇದೆ. ವೈಯಕ್ತಿಕ ಬದುಕು ಸಂತುಷ್ಟವಾಗಿರುತ್ತದೆ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಪಡೆಯುವ ಯೋಗ ಇದೆ. ಆರ್ಥಿಕ ವ್ಯವಹಾರಗಳು ಲಾಭದಾಯಕವಾಗಲಿದೆ. ಯಾವುದೇ ವಿಚಾರದಲ್ಲಿ ವ್ಯವಹಾರ ಮಾಡುವಾಗ ಸೂಕ್ಷ್ಮವಾಗಿ ವರ್ತಿಸಿ. ಪ್ರತಿಷ್ಠಿತ ಸಂಸ್ಥೆಯೊಂದು ಮುಖ್ಯವಾದ ಒಪ್ಪಂದಕ್ಕೆ ಬರಲಿದೆ. ಶುಭದಿನ: 18. ಲಿಂಗಾಷ್ಟಕ ಓದಿರಿ.

---

ವೈಯಕ್ತಿಕ ಬದುಕು ಉತ್ತಮವಾಗಲಿದೆ. ಶಿಕ್ಷಣ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ ಕಾಣುವ ಸಮಯ ಇದು. ಗುತ್ತಿಗೆ ಸೇವೆ ವಿಸ್ತರಣೆ ಆಗುವ ಶುಭ ಸುದ್ದಿ ದೊರೆಯಲಿದೆ. ಗೃಹ ನಿರ್ಮಾಣ ವಿಚಾರದಲ್ಲಿ ಪ್ರಗತಿ ಆಗಲಿದೆ. ಮನೆಯ ಹಿರಿಯರು ಮೆಚ್ಚುಗೆ ಸೂಚಿಸಲಿದ್ದಾರೆ. ಮಕ್ಕಳ ಕೆಲಸಗಳಿಂದ ಹೆಮ್ಮೆ ಮೂಡಲಿದೆ. ವಾರದ ಮಧ್ಯ ಭಾಗದಲ್ಲಿ ಹಣಕಾಸು ಹರಿವು ಹೆಚ್ಚಲಿದೆ. ಶುಭದಿನ: 20. ಹನುಮಾನ್ ಚಾಲಿಸ್ ಓದಿರಿ.





---





ಸಮಾಜ ಸೇವಾ ಕ್ಷೇತ್ರದಲ್ಲಿ ಇರುವವರಿಗೆ ಮನ್ನಣೆ ಸಿಗಲಿದೆ. ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಸಾಧ್ಯತೆ ಇದೆ. ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ಕಾಡುವುದರಿಂದ ಚಿಂತೆಗೆ ಕಾರಣವಾಗುತ್ತದೆ. ಆರೋಗ್ಯ ಸಮಸ್ಯೆಗಳಿಗೆ ಪರಿಹಾರ ದೊರೆಯುತ್ತದೆ. ವರ ಅನ್ವೇಷಣೆಯಲ್ಲಿ ತೊಡಗಿದ್ದರೆ ಸೂಕ್ತ ಸಂಬಂಧಗಳು ದೊರೆಯಲಿವೆ. ಶುಭದಿನ: 16. ನವದುರ್ಗಾ ಆರಾಧನೆ ಮಾಡಿರಿ.

---

ಪಿತ್ರಾರ್ಜಿತ ಆಸ್ತಿ ವ್ಯವಹಾರಗಳು ಅಂದುಕೊಂಡಂತೆ ನಡೆಯುತ್ತವೆ. ಕಾನೂನು ವ್ಯಾಜ್ಯಗಳಿದ್ದಲ್ಲಿ ಪರಿಹಾರ ದೊರೆಯಲಿದೆ. ಹಲವು ರೀತಿಯ ಅವಕಾಶಗಳು ನಿಮಗೆ ದೊರೆಯಲಿವೆ. ಇನ್ನಷ್ಟು ಪ್ರಾಮುಖ್ಯ ದೊರೆಯಲಿದೆ. ಧಾರ್ಮಿಕ ವಿಚಾರಗಳಿಗೆ ಹೆಚ್ಚು ಸಮಯವನ್ನು ಮೀಸಲಿಡಲಿದ್ದೀರಿ. ನಿಮ್ಮ ಕೆಲಸದ ಬಗ್ಗೆ ಮೆಚ್ಚುಗೆಯ ಮಾತುಗಳನ್ನು ಕೇಳಲಿದ್ದೀರಿ. ಶುಭದಿನ: 15. ಚಂಡಿಪಾರಾಯಣ ಮಾಡಿರಿ.




---




ಮನೆಯಲ್ಲಿ ಪ್ರಶಾಂತವಾದ ವಾತಾವರಣ ಇರುತ್ತದೆ. ಪ್ರೀತಿಪಾತ್ರರ ಜತೆಗೆ ಮನರಂಜನೆ ಕಾರ್ಯಕ್ರಮಗಳಲ್ಲಿ ಭಾಗಿಯಾಗಲಿದ್ದೀರಿ. ನಿಮ್ಮ ಹಿರಿಯ ಅಧಿಕಾರಿಗಳಿಂದ ಮೆಚ್ಚುಗೆಯ ಮಾತುಗಳನ್ನು ಕೇಳಲಿದ್ದೀರಿ. ವ್ಯವಹಾರ ಉದ್ಯಮದ ವಿಚಾರವಾಗಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಪಿತ್ರಾರ್ಜಿತ ಆಸ್ತಿಯಿಂದ ಲಾಭ ಆಗುವ ಯೋಗ ಇದೆ. ಶುಭದಿನ: 14. ಸೌಂದರ್ಯ ಲಹರಿ ಪಠಿಸಿರಿ.

---

ಕಾನೂನು ವ್ಯಾಜ್ಯಗಳಿದ್ದಲ್ಲಿ ನಿಮ್ಮ ಪರವಾಗಿ ತೀರ್ಪು ಬರುವ ಸಾಧ್ಯತೆ. ಮೇಲಧಿಕಾರಿಗಳಿಂದ ನಿರೀಕ್ಷಿತ ಮಟ್ಟದ ಪ್ರೋತ್ಸಾಹ ಬೆಂಬಲ ದೊರೆಯಲಿದೆ. ಆರೋಗ್ಯದ ಬಗ್ಗೆ ನಿಯಮಿತವಾದ ಕಾಳಜಿ ತೆಗೆದುಕೊಳ್ಳುವುದು ಅತ್ಯಗತ್ಯ. ವಾರದ ಮಧ್ಯ ಭಾಗದಲ್ಲಿ ಶುಭ ಸುದ್ದಿಯನ್ನು ಕೇಳಲಿದ್ದೀರಿ. ಉದ್ಯೋಗಸ್ಥರಿಗೆ ಹೊಸ ಜವಾಬ್ದಾರಿಗಳು ಹೆಗಲೇರಲಿವೆ. ಶುಭದಿನ: 16. ವಿಷ್ಣು ಸಹಸ್ರನಾಮ ಪಠಿಸಿರಿ.

